# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 936 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ |
| ಉತ್ತರಿಸಬೇಕಾದ ದಿನಾಂಕ | : | 24/02/2023 |
| ಉತ್ತರಿಸಬೇಕಾದವರು | : | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ | ವಿಷಯ | ಉತ್ತರ |
|---|---|---|
| ಅ) | ಕ್ರೈಸ್ ವಸತಿ ಶಾಲೆಗಳನ್ನು ಇತ್ತೀಚಿಗೆ ಕ್ರೀಡಾ ವಸತಿ ಶಾಲೆಗಳನ್ನಾಗಿ ಪರಿವರ್ತಿಸಲಾಗಿದೆಯೇ; (ಪೂರ್ಣ ವಿವರಗಳೊಡನೆ ಮಾಹಿತಿ ನೀಡುವುದು) | ಹೌದು<br>ಸರ್ಕಾರದ ಆದೇಶ ಸಂಖ್ಯೆ: ಸಕಇ 96 ಮೊದೇಶಾ 2021 ದಿನಾಂಕ:30.11.2021 ರಲ್ಲಿ ಕಂದಾಯ ವಿಭಾಗಕ್ಕೆ 01 ರಂತೆ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 04 ವಸತಿ ಶಾಲೆಗಳನ್ನು ಕ್ರೀಡಾ ವಸತಿ ಶಾಲೆಗಳನ್ನಾಗಿ ಪರಿವರ್ತಿಸಿ ಆದೇಶಿಸಲಾಗಿರುತ್ತದೆ.<br>ಸರ್ಕಾರದ ಆದೇಶ ಸಂಖ್ಯೆ: ಸಕಇ 324 ಎಂಡಿಎಸ್ 2022 ದಿನಾಂಕ: 02.11.2022 ರಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 37 ವಸತಿ ಶಾಲೆಗಳನ್ನು ಕ್ರೀಡಾ ವಸತಿ ಶಾಲೆಗಳನ್ನಾಗಿ ಪರಿವರ್ತಿಸಿ ಆದೇಶಿಸಲಾಗಿರುತ್ತದೆ. |
| ಆ) | ಕ್ರೈಸ್ ಸಂಸ್ಥೆಯ ಕ್ರೀಡಾ ವಸತಿ ಶಾಲೆಗಳ ರಚನೆಗೆ ಇರುವ ಮಾನದಂಡಗಳೇನು ಹಾಗೂ ಈ ಶಾಲೆಗಳಿಗೆ ನೀಡಿರುವ ಎಲ್ಲಾ ರೀತಿಯ ಸೌಲಭ್ಯಗಳೇನು; (ವಿವರಗಳೊಡನೆ ಮಾಹಿತಿ ನೀಡುವುದು) | ಕ್ರೀಡಾ ವಸತಿ ಶಾಲೆಗಳಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಹೆಚ್ಚು ಅವಕಾಶ ಕಲ್ಪಿಸಿಕೊಡಲು ಕ್ರಿಡಾಂಗಣ ಅವಶ್ಯವಿರುವುದರಿಂದ ಸ್ವಂತ ಕಟ್ಟಡ ಹೊಂದಿರುವ ಹಾಗೂ ಕ್ರೀಡಾಂಗಣಕ್ಕಾಗಿ ವಿಶಾಲ ಮೈದಾನ ಹೊಂದಿರುವ ವಸತಿ ಶಾಲೆಗಳನ್ನು ಆಯ್ಕೆ ಮಾಡಲಾಗಿದೆ.<br>ಕ್ರೀಡಾ ವಸತಿ ಶಾಲೆಗಳಿಗೆ ಅವಶ್ಯವಿರುವ ಸೌಲಭ್ಯಗಳನ್ನು ಸಂಘದ ಅನುದಾನದ ಲಭ್ಯತೆಯ ಆಧಾರದ ಮೇಲೆ ಹಂತ ಹಂತವಾಗಿ ಸೌಲಭ್ಯಗಳನ್ನು ಒದಗಿಸಲಾಗುವುದು. |
| ಇ) | ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳ ದೈಹಿಕ ಶಿಕ್ಷಣ ಶಿಕ್ಷಕರನ್ನು ಕ್ರೀಡಾ ಶಾಲೆಗಳ ಹೊರತು ಪಡಿಸಿ ಇತರ ವಸತಿ ಶಾಲೆಗಳಿಗೆ ಪ್ರಾಂಶುಪಾಲರಾಗಿ ನೇಮಕ ಮಾಡದಿರಲು ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: ಸಕಇ 324 ಎಂಡಿಎಸ್ 2022, ದಿನಾಂಕ:21.10.2022 ಹೊರಡಿಸಿರುವ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಕ್ರೀಡಾ ವಸತಿ ಶಾಲೆಗಳ ಪ್ರಾಂಶುಪಾಲರ ಹುದ್ದೆಗೆ ಈ ಕೆಳಕಂಡಂತೆ ನಿಯಮಗಳನ್ನು ರಚಿಸಲಾಗಿರುತ್ತದೆ.<br><br>**Sports school Principals:-**<br>Hundred Percent by promotion among the Cadre of Physical Education Teachers. Promotion is on the basis of seniority. Seniority is determined on the basis of length of service in the respective Cadre. |

| | | |
|---|---|---|
| | | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಕ್ರೀಡಾ ವಸತಿ ಶಾಲೆಗಳ ಸಮರ್ಪಕ ನಿರ್ವಹಣೆಗಾಗಿ ದೈಹಿಕ ಶಿಕ್ಷಣ ಶಿಕ್ಷಕರ ವೃಂದದಿಂದ ಕ್ರೀಡಾ ವಸತಿ ಶಾಲೆಗಳ ಪ್ರಾಂಶುಪಾಲರ ವೃಂದಕ್ಕೆ ಮುಂಬಡ್ತಿ ನೀಡಲಾಗಿರುತ್ತದೆ.<br><br>ಸರ್ಕಾರದ ಆದೇಶದನ್ವಯ ಪ್ರಸ್ತುತ ಮುಂಬಡ್ತಿ ಹೊಂದಿದ ದೈಹಿಕ ಶಿಕ್ಷಕರನ್ನು ಮುಂದಿನ ಸಾರ್ವತ್ರಿಕ ವರ್ಗಾವಣೆ ಅವಧಿಯಲ್ಲಿ ಕಡ್ಡಾಯವಾಗಿ ಕ್ರೀಡಾ ವಸತಿ ಶಾಲೆಗಳಿಗೆ ಸ್ಥಳ ನಿಯುಕ್ತಿಗೊಳಿಸುವ ಷರತ್ತಿಗೊಳಪಟ್ಟು ಪ್ರಸ್ತುತ ಖಾಲಿ ಇರುವ ವಸತಿ ಶಾಲೆಗಳಿಗೆ ಸ್ಥಳ ನಿಯುಕ್ತಿಗೊಳಿಸಿದೆ. |
| ಈ) | ಉನ್ನತೀಕರಿಸಿರುವ ಕ್ರೈಸ್ ವಸತಿ ಶಾಲೆ ಮತ್ತು ಕಾಲೇಜುಗಳಿಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆ ಸೃಜಿಸಲಾಗಿದೆಯೇ; | ಉನ್ನತೀಕರಿಸಿರುವ ಕ್ರೈಸ್ ವಸತಿ ಶಾಲೆ ಮತ್ತು ಕಾಲೇಜುಗಳಿಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆ ಸೃಜಿಸಲಾಗಿರುವುದಿಲ್ಲ. |
| ಉ) | ಸದರಿ ಶಾಲೆ ಮತ್ತು ಕಾಲೇಜುಗಳಲ್ಲಿ 120 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದರೂ ಹುದ್ದೆ ಸೃಜಿಸದಿರಲು ಕಾರಣಗಳೇನು? | 6 ರಿಂದ 10ನೇ ತರಗತಿಯವರೆಗೆ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳನ್ನು 6 ರಿಂದ 12 ನೇ ತರಗತಿಯವರೆಗೆ ಉನ್ನತೀಕರಿಸಿದ್ದು, 6 ರಿಂದ 10 ನೇ ತರಗತಿಯವರೆಗೆ ಸಂಬಂಧಿಸಿದಂತೆ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಮಂಜೂರಾಗಿರುತ್ತವೆ.<br><br>ವಸತಿ ಶಾಲೆಗಳ ದೈಹಿಕ ಶಿಕ್ಷಣ ಶಿಕ್ಷಕರಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಮಾದರಿಯಲ್ಲಿ ಮಾಹೆಯಾನ 16 ತರಗತಿಗಳನ್ನು ಮಾತ್ರ ತೆಗೆದು ಕೊಳ್ಳಲಾಗುತ್ತಿದ್ದು ಉನ್ನತೀಕರಿಸಲಾಗಿರುವ 11 ಮತ್ತು 12 ನೇ ತರಗತಿಗಳನ್ನು ಒಂದೇ ಶಾಲೆ, ಒಂದೇ ಆವರಣದಲ್ಲಿ ನಡೆಸಲಾಗುತ್ತಿರುವುದರಿಂದ ಹಾಗೂ ಕಾಲೇಜನ್ನು ಪ್ರತ್ಯೇಕವಾಗಿ ನಡೆಸುತ್ತಿಲ್ಲವಾದ್ದರಿಂದ, 11 ಮತ್ತು 12 ನೇ ತರಗತಿಗಳಿಗೆ ಪ್ರತ್ಯೇಕವಾಗಿ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಮಂಜೂರಾಗಿರುವುದಿಲ್ಲ. |

ಸಕಇ 24 ಎಂಡಿಎಸ್ 2023

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು